Akashvani : Bangalore
Regional Bulletin In Kannada
15.10.2024 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

- **ರಾಜ್ಯದ ಮೂರು ವಿಧಾನಸಭಾ ಕ್ಷೇತ್ರಗಳಿಗೆ ನವೆಂಬರ್ ೧೩ರಂದು ಉಪಚುನಾವಣೆ ; ೨೩ ರಂದು ಫಲಿತಾಂಶ ಪ್ರಕಟ**

- **ಜಾತಿ ಪ್ರಮಾಣಪತ್ರ ಗೊಂದಲ ನಿವಾರಿಸಲು ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ**

- **ಸರ್ಕಾರಿ ಶಾಲೆಗಳಲ್ಲಿ ದೈಹಿಕ ಶಿಕ್ಷಕರ ನೇಮಕಾತಿ ಕುರಿತಂತೆ ಮುಖ್ಯಮಂತ್ರಿ ಚರ್ಚೆ - ಸಚಿವ ಮಧುಬಂಗಾರಪ್ಪ**

- **ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತ ಹಿನ್ನಲೆ ; ಬೆಂಗಳೂರು ಸೇರಿ ರಾಜ್ಯದ ಹಲವೆಡೆ ಧಾರಾಕಾರ ಮಳೆ**

- **ಕೊಡಗು ಜಿಲ್ಲೆಯ ಶ್ರೀಮಂಗಲದಲ್ಲಿ ನಡೆಯುತ್ತಿದ್ದ ಹುಲಿ ಕಾರ್ಯಾಚರಣೆ ಸ್ಥಗಿತ**

<><*<><>*><>

ರಾಜ್ಯದ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೆ ದಿನಾಂಕ ಘೋಷಣೆಯಾಗಿದೆ. ದೆಹಲಿಯಲ್ಲಿಂದು ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಸುದ್ದಿಗೋಷ್ಠಿ ನಡೆಸಿ ಶಿಗ್ಗಾಂವಿ, ಚನ್ನಪಟ್ಟಣ ಮತ್ತು ಸಂಡೂರು ವಿಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣೆಗೆ ದಿನಾಂಕ ಪ್ರಕಟಿಸಿದ್ದಾರೆ. ನವೆಂಬರ್ ೧೩ರಂದು ಚನ್ನಪಟ್ಟಣ, ಸಂಡೂರು, ಶಿಗ್ಗಾಂವಿ ಈ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ನವೆಂಬರ್ ೨೩ರಂದು ಈ ಮೂರು ಕ್ಷೇತ್ರಗಳ ಮತ ಎಣಿಕೆ ನಡೆಯಲಿದೆ. ಸಂಸದರಾಗಿ ಆಯ್ಕೆಯಾಗಿರುವ ಹೆಚ್.ಡಿ ಕುಮಾರಸ್ವಾಮಿ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರಿಂದ ಚನ್ನಪಟ್ಟಣ ಕ್ಷೇತ್ರ ತೆರವಾಗಿದ್ದರೆ, ಬಸವರಾಜ ಬೊಮ್ಮಾಯಿ ರಾಜೀನಾಮೆಯಿಂದ ಶಿಗ್ಗಾಂವಿ ವಿಧಾನಸಭಾ ಕ್ಷೇತ್ರ ತೆರವಾಗಿದೆ. ಇ.ತುಕಾರಾಂ ರಾಜೀನಾಮೆಯಿಂದ ತೆರವಾಗಿರುವ ಸಂಡೂರು ಕ್ಷೇತ್ರಕ್ಕೂ ಉಪಚುನಾವಣೆ ನಡೆಯಲಿದೆ.

<><*<><>*><>

ಜಾತಿ ಪ್ರಮಾಣ ಪತ್ರದ ಬಗೆಗಿನ ಗೊಂದಲ ನಿವಾರಿಸಲು ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ. ವಿಧಾನಸೌಧದಲ್ಲಿ ಮಾತನಾಡಿದ ಅವರು ಗೊಂದಲವನ್ನು ನಿವಾರಿಸಿ, ಸೂಕ್ತ ಸುತ್ತೋಲೆ ಹೊರಡಿಸುವಂತೆ ಸಮಾಜ ಕಲ್ಯಾಣ ಕಾರ್ಯದರ್ಶಿಗಳು ಹಾಗೂ

ಕಾನೂನು ಇಲಾಖಾ ಕಾರ್ಯದರ್ಶಿಗಳಿಗೆ ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು. ಇಂದು ಪರಿಶಿಷ್ಟ ಪಂಗಡದ ಸಮುದಾಯಗಳ ಸಭೆ ನಡೆಸಲಾಗಿದ್ದು, ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಆಗಿರುವ ಅವ್ಯವಹಾರದ ಹಿನ್ನಲೆಯಲ್ಲಿ ವಾಲ್ಮೀಕಿ ಅಭಿವೃದ್ಧಿ ನಿಗಮಕ್ಕೆ ಅನುದಾನದ ಕೊರತೆಯಾಗಬಾರದೆಂದು  ಸೂಚಿಸಿದ್ದಾರೆ. ಈ ವರ್ಷದಲ್ಲಿ ನಿಗದಿಪಡಿಸಲಾಗಿರುವ ಅನುದಾನವನ್ನು ಸಂಪೂರ್ಣವಾಗಿ ಒದಗಿಸಲಾಗುವುದು. ನಿಗಮದಲ್ಲಿ ಸುಮಾರು ೮೯ ಕೋಟಿ ೬೩ ಲಕ್ಷ ರೂಪಾಯಿಗಳ ಮೊತ್ತ ಅವ್ಯವಹಾರವಾಗಿದ್ದು, ಇದರಲ್ಲಿ ೫ ಕೋಟಿ ರೂಪಾಯಿಗಳನ್ನು ವಾಪಸ್ಸು ಪಡೆಯಲಾಗಿದೆ. ಉಳಿದ ೮೪ ಕೋಟಿ ೬೩ ಲಕ್ಷ ರೂಪಾಯಿಗಳಲ್ಲಿ ೭೧ ಕೋಟಿ ೫೪ ಲಕ್ಷ ರೂಪಾಯಿಗಳನ್ನು ವಸೂಲು ಮಾಡಲಾಗಿದೆ ಎಂದು ಹೇಳಿದ್ದಾರೆ

<><*<><>*><>

ಸರ್ಕಾರಿ ಶಾಲೆಗಳಲ್ಲಿ ದೈಹಿಕ ಶಿಕ್ಷಕರ ಕೊರತೆ ಇದ್ದು, ನೇಮಕಾತಿ ಮಾಡಿಕೊಳ್ಳುವ ಸಂಬಂಧ ಮುಖ್ಯಮಂತ್ರಿ ಜೊತೆ ಚರ್ಚೆ ನಡೆಸಲಾಗುವುದು ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ. ಧಾರವಾಡದಲ್ಲಿ ಮಾತನಾಡಿದ ಅವರು, ಮಕ್ಕಳಿಗೆ ಈಗ ಆರೂ ದಿನ ಮೊಟ್ಟೆ ವಿತರಣೆ ಮಾಡಲಾಗುತ್ತಿದೆ. ಮಕ್ಕಳು ಕೇವಲ ಮೊಟ್ಟೆ ತಿಂದರೆ ಸಾಲದು ವ್ಯಾಯಾಮ ಕೂಡ ಮಾಡಬೇಕು ಎಂದು ಸಲಹೆ ನೀಡಿದ್ದಾರೆ.  ಕಲ್ಯಾಣ ಕರ್ನಾಟಕ ಭಾಗದಲ್ಲಿ ದೈಹಿಕ ಶಿಕ್ಷಕರ ಅವಶ್ಯಕತೆ ಇದೆ ಎಂದು ತಿಳಿಸಿದ್ದಾರೆ. ಶಾಲೆಗಳಲ್ಲಿ ವಿಜ್ಞಾನ ಲ್ಯಾಬ್‌ಗಳನ್ನು ಮಾಡಲಾಗಿದ್ದು, ಇದರಿಂದ ೧೬ ಜಿಲ್ಲೆಗಳ ೨ ಸಾವಿರದ ೪೦೦ ಮಕ್ಕಳಿಗೆ ಅನುಕೂಲ ಆಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

**ಧ್ವನಿ : ಮಧುಬಂಗಾರಪ್ಪ**

ಕಲ್ಯಾಣ ಕರ್ನಾಟಕ ಭಾಗದಲ್ಲಿ ೧ ಸಾವಿರದ ೮ ಎಲ್‌ಕೆಜಿ, ಯುಕೆಜಿ ಶಾಲೆ ಆರಂಭಿಸಲಾಗಿದ್ದು, ೧೩ ಸಾವಿರ ಶಿಕ್ಷಕರ ನೇಮಕಾತಿ ಆಗಿದೆ. ಅನುದಾನಿತ ಶಾಲೆಯಲ್ಲಿ ೬ ಸಾವಿರ ಶಿಕ್ಷಕರ ನೇಮಕಾತಿ ಆಗಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ೫ ಸಾವಿರದ ೮೦೦ ಶಿಕ್ಷಕರ ನೇಮಕಾತಿ ಮಾಡಿಕೊಳ್ಳಲು ಸಂಪುಟದಲ್ಲಿ ಅನುಮತಿ ದೊರೆತಿದೆ ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನ ನವಿಲುತೀರ್ಥ ಇಂದಿರಾಗಾಂಧಿ ಜಲಾಶಯದಲ್ಲಿ ಮಲಪ್ರಭಾ ನದಿಗೆ ಗಂಗಾಪೂಜೆಯ ಮೂಲಕ ಮಹಿಳಾ ಹಾಗೂ ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಬಾಗಿನ ಅರ್ಪಿಸಿದರು.  ನಂತರ ಮಾತನಾಡಿದ ಅವರು, ಈ ವರ್ಷ ಚೆನ್ನಾಗಿ ಮಳೆಯಾಗಿರುವುದರಿಂದ ನವಿಲುತೀರ್ಥ ಇಂದಿರಾಗಾಂಧಿ ಜಲಾಶಯ ಪೂರ್ಣಪ್ರಮಾಣದಲ್ಲಿ ಭರ್ತಿಯಾಗಿದೆ. ೨ ಸಾವಿರದ ೭೯ ಅಡಿ ಆಳವಿರುವ ಜಲಾಶಯದಲ್ಲಿ ೩೭.೭. ಟಿಎಂಸಿ ನೀರಿನ ಸಂಗ್ರಹವಾಗಿದೆ. ಇದರಿಂದ ಈ ವರ್ಷ ಈ ಭಾಗದ ರೈತರ ಕೃಷಿ ಚಟುವಟಿಕೆಗಳು ಹಾಗೂ ಕುಡಿಯುವ ನೀರಿಗೆ ಯಾವುದೇ ರೀತಿ ನೀರಿನ ಕೊರತೆಯಾಗುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಶಾಸಕ ಎನ್.ಎಚ್ ಕೋನರೆಡ್ಡಿ, ವಿಶ್ವಾಸ್ ವೈದ್ಯ, ಬಿ.ವಿ. ಚಿಮ್ಮನಕಟ್ಟಿ ಸೇರಿದಂತೆ ನೀರಾವರಿ ಇಲಾಖೆ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><*<><>*><>

ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತವಾಗಿರುವುದರಿಂದ ರಾಜಧಾನಿ ಬೆಂಗಳೂರಿನಲ್ಲಿ ಧಾರಾಕಾರ ಮಳೆ ಸುರಿಯುತ್ತಿದೆ. ಮಳೆಯಿಂದಾಗಿ ರಸ್ತೆಯಲ್ಲಿ ನೀರು ನಿಂತಿದ್ದು, ಹಲವೆಡೆ ಟ್ರಾಫಿಕ್‌ಜಾಮ್ ಉಂಟಾಗಿ ವಾಹನ ಸವಾರರು ಪರದಾಡುವಂತಾಗಿದೆ. ನಗರದಲ್ಲಿ ಇನ್ನು ಮೂರು ದಿನಗಳ ಕಾಲ ಮಳೆ ಸುರಿಯಲಿದ್ದು, ಹಳದಿ ಅಲರ್ಟ್ ಘೋಷಿಸಲಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಭಾರೀ ಮಳೆಯಾಗುವ ಮುನ್ಸೂಚನೆ ಹಿನ್ನೆಲೆಯಲ್ಲಿ ರಾಜ್ಯದ ೧೩ ಜಿಲ್ಲೆಗಳಲ್ಲಿಯೂ ಹಳದಿ ಅಲರ್ಟ್ ಘೋಷಿಸಲಾಗಿದೆ. ಈ ಕುರಿತಂತೆ ಹವಾಮಾನ ಇಲಾಖೆ ನಿರ್ದೇಶಕ ಸಿ.ಎಸ್. ಪಾಟೀಲ್ ಆಕಾಶವಾಣಿಯೊಂದಿಗೆ ಮಾಹಿತಿ ಹಂಚಿಕೊಂಡಿದ್ದಾರೆ.

**ಧ್ವನಿ : ಸಿ.ಎಸ್. ಪಾಟೀಲ್**

ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಮಂಡ್ಯ, ಮೈಸೂರು, ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ, ಹಾಸನ, ಚಾಮರಾಜನಗರ ಮತ್ತು ಕೊಡಗಿನಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆಯಿದೆ. ಕರಾವಳಿ ಜಿಲ್ಲೆಗಳಲ್ಲೂ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ಬೆಂಗಳೂರಿನಲ್ಲಿ ನಿರಂತರ ಮಳೆಯಾಗುತ್ತಿದ್ದು, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ನಾಳೆ ಜಿಲ್ಲೆಯ ಅಂಗನವಾಡಿ ಕೇಂದ್ರಗಳಿಗೆ ಹಾಗೂ ಸರ್ಕಾರಿ, ಖಾಸಗಿ ಅನುದಾನಿತ ಪ್ರಾಥಮಿಕ ಪ್ರೌಢಶಾಲೆಗಳಿಗೆ ರಜೆ ಘೋಷಿಸಲಾಗಿದೆ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ. ಪದವಿ, ಸ್ನಾತಕೋತ್ತರ, ಡಿಪ್ಲೋಮಾ, ಇಂಜಿನಿಯರಿಂಗ್, ಐಟಿಐಗಳಿಗೆ ರಜೆ ಘೋಷಿಸಿರುವುದಿಲ್ಲ ಎಂದು ಸ್ಪಷ್ಟಪಡಿಸಿದೆ.

<><*<><>*><>

ಬೆಂಗಳೂರಿನಲ್ಲಿ ಧಾರಾಕಾರ ಮಳೆ ಸುರಿಯುತ್ತಿರುವುದರಿಂದ ಜನಜೀವನ ಅಸ್ತವ್ಯಸ್ತವಾಗಿದೆ. ನಿರಂತರ ಮಳೆ ಹಿನ್ನೆಲೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪಾಲಿಕೆ ಕಚೇರಿಯ ನಿಯಂತ್ರಣ ಕೊಠಡಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಅಧಿಕಾರಿಗಳೊಂದಿಗೆ ಮಳೆಹಾನಿ ಕುರಿತು ಚರ್ಚೆ ನಡೆಸಿದ್ದಾರೆ.

<><*<><>*><>

ಹಾವೇರಿ ಜಿಲ್ಲೆಯಲ್ಲಿ ಏಳು ದಿನಗಳಿಂದ ದಾಖಲೆಯ ಮಳೆ ಸುರಿದಿದ್ದು, ಮಳೆಯಿಂದಾಗಿ ಜಿಲ್ಲೆಯಲ್ಲಿ ೧೪೬ ಮನೆಗಳಿಗೆ ಹಾನಿಯಾಗಿದೆ. ಈ ಬಗ್ಗೆ ಅಧಿಕಾರಿಗಳ ಜಂಟಿ ತಂಡದಿಂದ ಪರಿಶೀಲನೆ ನಡೆಯುತ್ತಿದೆ ಎಂದು ಜಿಲ್ಲಾಧಿಕಾರಿ ಡಾ. ವಿಜಯ ಮಹಾಂತೇಶ್ ದಾನಮ್ಮನವರ ತಿಳಿಸಿದ್ದಾರೆ.

ಚಿಕ್ಕಮಗಳೂರು ಜಿಲ್ಲೆಯ ಹಲವೆಡೆ ಇಂದು ಮುಂಜಾನೆಯಿಂದ ಮಳೆಯಾಗುತ್ತಿದ್ದು ಭಕ್ತರಹಳ್ಳಿ ಗ್ರಾಮದಲ್ಲಿ ಮನೆಯೊಂದು ಕುಸಿದಿದೆ. ನಗರದಲ್ಲಿ ಜನ ಜೀವನ ಅಸ್ತ ವ್ಯಸ್ತಗೊಂಡಿದೆ.

<><*<><>*><>

ಕೊಡಗು ಜಿಲ್ಲೆಯ ಶ್ರೀಮಂಗಲ ಹೋಬಳಿಯ ವೆಸ್ಟ್ ನೆಮ್ಮಲೆ ಗ್ರಾಮದಲ್ಲಿ ಹುಲಿಯನ್ನು ಸೆರೆ ಹಿಡಿಯಲು ನಡೆಸಲಾಗುತ್ತಿದ್ದ ಕಾರ್ಯಾಚರಣೆಯನ್ನು ಇಂದು ಸಂಜೆಯಿಂದ ಸ್ಥಗಿತಗೊಳಿಸಲಾಗಿದೆ. ಗ್ರಾಮ ಸಮೀಪದ ಅರಣ್ಯಕ್ಕೆ ಹುಲಿ ತೆರಳಿರುವ ಹೆಜ್ಜೆ ಗುರುತು ಪತ್ತೆಯಾದ ಹಿನ್ನಲೆಯಲ್ಲಿ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಲಾಗಿದೆ ಎಂದು ಅರಣ್ಯ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ. ಕಳೆದ ೨ ತಿಂಗಳಿನಿಂದ ಶ್ರೀಮಂಗಲ ಹೋಬಳಿ ವ್ಯಾಪ್ತಿಯಲ್ಲಿ ೧೮ ಹಸುಗಳನ್ನು ಹುಲಿ ದಾಳಿ ಮಾಡಿ ಕೊಂದಿತ್ತು. ಕಾರ್ಯಾಚರಣೆ ಮುಗಿದ ಹಿನ್ನೆಲೆಯಲ್ಲಿ ಮತ್ತಿಗೋಡು ಸಾಕಾನೆ ಶಿಬಿರದಿಂದ ಆಗಮಿಸಿದ್ದ ಶ್ರೀರಾಮ ಮತ್ತು ಅಜಯ ಸಾಕಾನೆಗಳು ತಮ್ಮ ಶಿಬಿರಕ್ಕೆ ಮರಳಿವೆ.

<><*<><>*><>

ಕೊಡಗು ಜಿಲ್ಲೆಯ ಶ್ರೀಮಂಗಲ ಹೋಬಳಿಯ ವೆಸ್ಟ್ ನೆಮ್ಮಲೆ ಗ್ರಾಮದಲ್ಲಿ ಹುಲಿಯನ್ನು ಸೆರೆ ಹಿಡಿಯಲು ನಡೆಸಲಾಗುತ್ತಿದ್ದ ಕಾರ್ಯಾಚರಣೆಯನ್ನು ಇಂದು ಸಂಜೆಯಿಂದ ಸ್ಥಗಿತಗೊಳಿಸಲಾಗಿದೆ. ಗ್ರಾಮ ಸಮೀಪದ ಅರಣ್ಯಕ್ಕೆ ಹುಲಿ ತೆರಳಿರುವ ಹೆಜ್ಜೆ ಗುರುತು ಪತ್ತೆಯಾದ ಹಿನ್ನಲೆಯಲ್ಲಿ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಲಾಗಿದೆ ಎಂದು ಅರಣ್ಯ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ. ಕಳೆದ ೨ ತಿಂಗಳಿನಿಂದ ಶ್ರೀಮಂಗಲ ಹೋಬಳಿ ವ್ಯಾಪ್ತಿಯಲ್ಲಿ ೧೮ ಹಸುಗಳನ್ನು ಹುಲಿ ದಾಳಿ ಮಾಡಿ ಕೊಂದಿತ್ತು. ಕಾರ್ಯಾಚರಣೆ ಮುಗಿದ ಹಿನ್ನೆಲೆಯಲ್ಲಿ ಮತ್ತಿಗೋಡು ಸಾಕಾನೆ ಶಿಬಿರದಿಂದ ಆಗಮಿಸಿದ್ದ ಶ್ರೀರಾಮ ಮತ್ತು ಅಜಯ ಸಾಕಾನೆಗಳು ತಮ್ಮ ಶಿಬಿರಕ್ಕೆ ಮರಳಿವೆ.

<><*<><>*><>

ಕನ್ನಡ ಭಾಷೆ ಉಳಿದರೆ ಕನ್ನಡಿಗರು ಉಳಿಯಲು ಸಾಧ್ಯ. ಕನ್ನಡದ ಉಳಿವಿಗಾಗಿ ಹೋರಾಡಿದ ಹೋರಾಟಗಾರರನ್ನು ಸ್ಮರಿಸಬೇಕು ಎಂದು ಶಾಸಕ ಎಸ್.ಎನ್. ಚನ್ನಬಸಪ್ಪ ಶಿವಮೊಗ್ಗದಲ್ಲಿ ತಿಳಿಸಿದ್ದಾರೆ. 'ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ' ಎಂಬ ಅಭಿಯಾನದ ಕನ್ನಡಜ್ಯೋತಿ ರಥವನನ್ನು ಸ್ವಾಗತಿಸಿ ಮಾತನಾಡಿದ ಅವರು, ಕನ್ನಡ ಒಂದು ಭಾಷೆಯಲ್ಲ, ಅದು ನಮ್ಮ ಬದುಕಾಗಿದೆ. ಕವಿಗಳು, ಸಾಹಿತಿಗಳ ಮೂಲಕ ಅಕ್ಷರ ರೂಪದಲ್ಲಿ ಕನ್ನಡ ಭಾಷೆ ಜೀವಂತವಾಗಿರಲು ಸಹಕಾರಿಯಾಗಿದೆ. ಪ್ರತಿಯೊಬ್ಬರು ಕನ್ನಡ ಸಾಹಿತ್ಯಗಳನ್ನು ಓದುವ ಮೂಲಕ ಕನ್ನಡ ಭಾಷೆಯನ್ನು ಉಳಿಸಿ ಬೆಳಸಬೇಕಾಗಿದೆ ಎಂದು ಕರೆ ನೀಡಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>